**Akashvani : Bangalore**
**Regional Bulletin In Kannada**
**20.03.2026 / 18.40  hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**20.03.2026 / 18.40   hrs**

**<><*<><>*><>**

<u>ಮುಖ್ಯಾಂಶಗಳು</u>

**೧.	ಮಹಿಳಾ ಸಬಲೀಕರಣಕ್ಕೆ ವಿಶ್ವದಲ್ಲಿಯೇ ಹೆಚ್ಚು ಅವಕಾಶ ಕಲ್ಪಿಸಿದ ಭಾರತ - ಸಚಿವ ಡಾ.ಜಿ.ಪರಮೇಶ್ವರ್**

**೨.	ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಬಜೆಟ್ ಬಗ್ಗೆ ಆಡಳಿತ ಪಕ್ಷದಲ್ಲೇ ವಿರೋಧ ; ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪ**

**೩.	ಕುದುರೆಮುಖ ರಾಷ್ಟ್ರೀಯ ಉದ್ಯಾನದಲ್ಲಿ ೨೫ಕ್ಕೂ ಹೆಚ್ಚು ಕಡೆ ಬೆಂಕಿ ; ತಪ್ಪಿತಸ್ಥರ ವಿರುದ್ಧ ಕ್ರಮ - ಸಚಿವ ಈಶ್ವರ್ ಖಂಡ್ರೆ**

**೪.	ದಾಂಡೇಲಿಯಲ್ಲಿ ನೂತನ ಸ್ವಯಂಚಾಲಿತ ಚಾಲನಾ ಪರೀಕ್ಷಾ ಪಥಕ್ಕೆ ಸಾರಿಗೆ ಸಚಿವ ರಾಮಲಿಂಗ ರೆಡ್ಡಿ ಚಾಲನೆ**

**೫.	ತುಂಗಭದ್ರ ಜಲಾಶಯದ ಗೇಟ್ ಅಳವಡಿಕೆ ಕಾರ್ಯ ಪ್ರಗತಿಯಲ್ಲಿ - ಸಚಿವ ಎನ್.ಎಸ್.ಬೋಸರಾಜು**

**<><*<><>*><>**

ವಿಶ್ವದಲ್ಲಿ ಭಾರತದಲ್ಲಿಯೇ ಮಹಿಳೆಯರಿಗೆ ಹೆಚ್ಚು ಅವಕಾಶಗಳನ್ನು ಕಲ್ಪಿಸಿ ಸಬಲೀಕರಣಗೊಳಿಸಲಾಗಿದೆ. ಇಂದು ಮಹಿಳೆ ಎಲ್ಲ ಕ್ಷೇತ್ರದಲ್ಲೂ ಪುರುಷರನ್ನು ಹಿಂದಿಕ್ಕಿ ಸಾಧನೆ ಮಾಡುತ್ತಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು. ತುಮಕೂರಿನಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ಸಿಕ್ಕಂತೆ, ಸಂಸತ್ತಿನಲ್ಲಿಯೂ ಮಹಿಳಾ ಮೀಸಲಾತಿ ಸಿಗಬೇಕು ಎಂದರು. ಈ ಹಿಂದೆ ರಾಜೀವಗಾಂಧಿ ಅವರು ಪ್ರಧಾನಮಂತ್ರಿ ಆಗಿದ್ದಾಗ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಶೇಕಡ ೫೦ ರಷ್ಟು ಸ್ಥಾನಮಾನಗಳನ್ನು ಕೊಡುವ ನಿಟ್ಟಿನಲ್ಲಿ ಸಂವಿಧಾನಕ್ಕೆ ತಿದ್ದುಪಡಿ ತಂದು ಅವಕಾಶಗಳನ್ನು ಕಲ್ಪಿಸಿದ್ದರು. ರಾಜ್ಯ ಸರ್ಕಾರ ತನ್ನ ಪ್ರಣಾಳಿಕೆಯಲ್ಲಿಯೇ ಘೋಷಿಸಿದಂತೆ ಮಹಿಳೆಯರ ಸಬಲೀಕರಣಕ್ಕೆ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ ಎಂದರು. ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮಾತನಾಡಿ, ಯಾರೂ ಅವಕಾಶಗಳನ್ನು ಕಾದು ಕೂರುವುದು ಸರಿಯಲ್ಲ. ಅವಕಾಶಗಳನ್ನು ಸೃಷ್ಟಿಸಿಕೊಳ್ಳಬೇಕು, ವಿಶೇಷವಾಗಿ ಮಹಿಳೆಯವರು ಅತಿದೊಡ್ಡ ಜವಾಬ್ದಾರಿ ಹೊಂದಿರುತ್ತಾರೆ. ಮನೆಯ ಒಳಗೆ ಮತ್ತು ಹೊರಗೆ ದುಡಿಯಬೇಕಾಗುತ್ತದೆ. ಈ ನಡುವೆ ತಮ್ಮ ಆರೋಗ್ಯವನ್ನೂ ನೋಡಿಕೊಳ್ಳಬೇಕು ಎಂದರು.

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಂಡಿಸಿದ ಬಜೆಟ್ ಬಗ್ಗೆ ಆಡಳಿತ ಪಕ್ಷದಲ್ಲೇ ವಿರೋಧವನ್ನು ನಾವು ಗಮನಿಸುತ್ತಿದ್ದೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಮಾಧ್ಯಮ

ಪ್ರತಿನಿಧಿಗಳ ಜೊತೆ ಇಂದು ಮಾತನಾಡಿದ ಅವರು, ಆಡಳಿತ ಪಕ್ಷದಲ್ಲಿ ಇವತ್ತು ನಿರುತ್ಸಾಹ ಕಾಣುತ್ತಿದೆ. ಅನುಭವಿ ಮುಖ್ಯಮಂತ್ರಿಗಳು ೧೬ನೇ ಬಜೆಟ್ ಮಂಡಿಸುತ್ತಿರುವಾಗ ಆ ಕುರಿತು ಸಾಕಷ್ಟು ನಿರೀಕ್ಷೆಯನ್ನು ಹುಟ್ಟುಹಾಕಿದ್ದರು. ಸಿದ್ದರಾಮಯ್ಯನವರ ಬಜೆಟ್ ರಾಜ್ಯದ ಜನರ ಭರವಸೆಯನ್ನು ನುಚ್ಚುನೂರು ಮಾಡಿದೆ ಎಂದು ಟೀಕಿಸಿದರು. ಕಳೆದ ಎರಡೂವರೆ ವರ್ಷಗಳಿಂದ ಅಭಿವೃದ್ಧಿ ಇಲ್ಲದೇ ರಾಜ್ಯ ತೊಂದರೆ ಅನುಭವಿಸುತ್ತಿದೆ; ಇದು ಮುಂದುವರಿಯುತ್ತದೆ ಎಂಬುದರಲ್ಲಿ ಯಾವುದೇ ಸಂದೇಹ ಇಲ್ಲ ಎಂದರು. ಒಟ್ಟಾರೆಯಾಗಿ ಸಿದ್ದರಾಮಯ್ಯನವರು ಮಂಡಿಸಿದ ಬಜೆಟ್ ರಾಜ್ಯದ ಅಭಿವೃದ್ಧಿಗೆ ಪೂರಕವಾಗಿಲ್ಲ; ರಾಜ್ಯದ ರೈತರಿಗೆ ಅನುಕೂಲ ಆಗುತ್ತಿಲ್ಲ. ರಾಜ್ಯದಲ್ಲಿರುವ ಯುವಜನತೆಗೆ ಕೂಡ ಉದ್ಯೋಗ ಸೃಷ್ಟಿ ಮಾಡುವುದರಲ್ಲಿ ವಿಫಲವಾಗಿದೆ. ದೂರದೃಷ್ಟಿ ಇಲ್ಲದ ಬಜೆಟ್ ಇದಾಗಿದೆ ಎಂದು ದೂರಿದರು.

<><*<><>*><>

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಸಂಬಂಧಿಸಿದಂತೆ ಇಂದು ೯ ನಾಮಪತ್ರಗಳು ಸಲ್ಲಿಕೆಯಾಗಿವೆ. ಇದರೊಂದಿಗೆ ಚುನಾವಣಾ ಕಣದಲ್ಲಿ ಸಲ್ಲಿಕೆಯಾದ ಒಟ್ಟು ಅರ್ಜಿಗಳ ಸಂಖ್ಯೆ ೧೦ಕ್ಕೆ ಏರಿಕೆಯಾಗಿದೆ. ಒಟ್ಟು ೮ ಅಭ್ಯರ್ಥಿಗಳು ತಮ್ಮ ಉಮೇದುವಾರಿಕೆಯನ್ನು ಸಲ್ಲಿಸಿದ್ದು, ಈ ಪೈಕಿ ಶಾಮನೂರು ಸಮರ್ಥ್ ಎರಡು ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ಶ್ರೀನಿವಾಸ್ ಡಿ. ದಾಸ ಕರಿಯಪ್ಪ, ಈರಣ್ಣ, ಎಂ.ಜಿ.ಶ್ರೀಕಾಂತ್, ಸಾಧಿಕ್ ಪೈಲ್ವಾನ್ ಸುಭಾನ್ ಖಾನ್ ಮತ್ತು ದಾದಾ ಕಲಂದರ್ ಸೇರಿದಂತೆ ಒಟ್ಟು ೯ ಮಂದಿ ೧೦ ನಾಮಪತ್ರ ಸಲ್ಲಿಸಿದ್ದಾರೆ ಎಂದು ಚುನಾವಣಾಧಿಕಾರಿ ಸಂತೋಷ್ ಕುಮಾರ್ ತಿಳಿಸಿದ್ದಾರೆ.

<><*<><>*><>

ಉಪ ಚುನಾವಣೆ ನಡೆಯುವ ರಾಜ್ಯದ ಎರಡೂ ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿ ದೊಡ್ಡ ಅಂತರದಲ್ಲಿ ಗೆಲುವು ಸಾಧಿಸಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭೆ ಕ್ಷೇತ್ರದ ಉಪ ಚುನಾವಣೆಗಳಿಗೆ ಸಂಬಂಧಿಸಿ ನಮ್ಮ ಪಕ್ಷದ ವರಿಷ್ಠರು ಅಭ್ಯರ್ಥಿಗಳನ್ನು ಘೋಷಿಸಿದ್ದಾರೆ. ಬಾಗಲಕೋಟೆಗೆ ಮಾಜಿ ಶಾಸಕ ವೀರಣ್ಣ ಚರಂತಿಮಠ್, ದಾವಣಗೆರೆ ದಕ್ಷಿಣಕ್ಕೆ ಶ್ರೀನಿವಾಸ ದಾಸ ಕರಿಯಪ್ಪ ಅವರ ಹೆಸರನ್ನು ಘೋಷಿಸಲಾಗಿದೆ ಎಂದು ತಿಳಿಸಿದರು. ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆ ಕುರಿತು ಸದನದಲ್ಲಿ ಒತ್ತಾಯಿಸಲಾಗಿದ್ದು, ಅಲ್ಲಿ ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ; ಅಲ್ಲದೆ ಪಂಚಾಯತ್‌ರಾಜ್ ವ್ಯವಸ್ಥೆಗೆ ಕೊಡಲಿ ಪೆಟ್ಟು ಕೊಡುವ ಕೆಲಸವನ್ನು ಕಾಂಗ್ರೆಸ್ ಮಾಡಿದೆ ಎಂದು ಆರೋಪಿಸಿದ್ದಾರೆ.

<><*<><>*><>

ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಪಂಚಾಯತ್ ರಾಜ್ ಹಾಗೂ ಸ್ಥಳೀಯ ಸರ್ಕಾರದ ವಿಶೇಷ ಮಾನಿಟರ್ ಆಗಿರುವ ಉಮಾಕಾಂತ್ ಅವರು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಕನ್ನಮಂಗಲ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿದರು. ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಿವಕುಮಾರ್ ಹಾಗೂ ದೇವನಹಳ್ಳಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶ್ರೀನಾಥಗೌಡ ಪಂಚಾಯಿತಿ ಆಡಳಿತದ ಹಾಗೂ ಸರ್ಕಾರಿ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು. ಸ್ಥಳೀಯ ಸರ್ಕಾರಗಳ ಆಡಳಿತ ವೈಖರಿ, ಸರ್ಕಾರಿ ಯೋಜನೆಗಳ ಅನುಷ್ಠಾನ, ಸಂವಿಧಾನದ ಧ್ಯೇಯೋದ್ದೇಶಗಳನ್ನು ಸಾಕಾರಗೊಳಿಸುವಲ್ಲಿ ಎದುರಾಗುತ್ತಿರುವ ಸವಾಲುಗಳು ಹಾಗೂ ಇತ್ಯಾದಿಗಳ ಕುರಿತು ಉಮಾಕಾಂತ್ ಅಧ್ಯಯನ ನಡೆಸಿದರು.

<><*<><>*><>

ಕುದುರೆಮುಖ ರಾಷ್ಟ್ರೀಯ ಉದ್ಯಾನದ ೨೫ಕ್ಕೂ ಹೆಚ್ಚು ಕಡೆ ಬೆಂಕಿ ಕಾಣಿಸಿಕೊಂಡಿರುವ ಬಗ್ಗೆ ತೀವ್ರ ಆತಂಕ ವ್ಯಕ್ತಪಡಿಸಿರುವ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ, ಮಂಗಳೂರು ವಿಭಾಗದ ಅರಣ್ಯಾಧಿಕಾರಿ ಮರಿಯಪ್ಪ ಕರಿಕಳನ್ ನೇತೃತ್ವದಲ್ಲಿ ತನಿಖೆಗೆ ಆದೇಶಿಸಿದ್ದಾರೆ. ಬೆಂಗಳೂರಿನ ತಮ್ಮ ಅಧಿಕೃತ ನಿವಾಸದಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ತುರ್ತು ಸಭೆ ನಡೆಸಿದ ಅವರು, ಕೆಲವು ಕಿಡಿಗೇಡಿಗಳು ಕಾಡಿಗೆ ಬೆಂಕಿ ಹಚ್ಚಿದ್ದಾರೆ ಮತ್ತು ಕಾಡ್ಗಿಚ್ಚು ವೀಕ್ಷಕರ ಕೊರತೆಯೂ ಈ ಅನಾಹುತಕ್ಕೆ ಕಾರಣವಾಗಿದೆ. ಈ ಬಗ್ಗೆ ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮದ ಶಿಫಾರಸ್ಸಿನೊಂದಿಗೆ ೭ ದಿನಗಳ ಒಳಗಾಗಿ ವರದಿ ಸಲ್ಲಿಸುವಂತೆ ಸೂಚಿಸಿದರು.

<><*<><>*><>

ದಾಂಡೇಲಿಯ ಅಂಬೇವಾಡಿಯ ಸಹಾಯಕ ಪ್ರಾದೇಶಿಕ ಸಾರಿಗೆ  ಕಚೇರಿಯಲ್ಲಿ ಸ್ವಯಂಚಾಲಿತ ಚಾಲನಾ ಪರೀಕ್ಷಾ ಪಥವನ್ನು ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಉದ್ಘಾಟಿಸಿದರು. ರಾಜ್ಯದಲ್ಲಿ ಈಗಾಗಲೇ ೨೦ ಸ್ವಯಂಚಾಲಿತ ಚಾಲನಾ ಪರೀಕ್ಷಾ ಪಥ ಕಾರ್ಯನಿರ್ವಹಿಸುತ್ತಿದ್ದು, ಇನ್ನುಳಿದ ೨೫ ಮುಂದಿನ ದಿನಗಳಲ್ಲಿ ಸೇವೆಗೆ ದೊರಕಲಿದೆ ಎಂದು ತಿಳಿಸಿದರು. ಮುಂದಿನ ಮೂರ್ನಾಲ್ಕು ತಿಂಗಳಲ್ಲಿ ರಾಜ್ಯದಲ್ಲಿ ಒಟ್ಟು ೪೫ ಸ್ವಯಂಚಾಲಿತ ಚಾಲನಾ ಪರೀಕ್ಷಾ ಪಥ ರಾಜ್ಯದಲ್ಲಿ ಕಾರ್ಯನಿರ್ವಹಿಸಲಿದ್ದು, ಇದರಿಂದ ಕರ್ನಾಟಕ ರಾಜ್ಯ ದೇಶದಲ್ಲೇ ಅತೀ ಹೆಚ್ಚು ಸ್ವಯಂಚಾಲಿತ ಚಾಲನಾ ಪರೀಕ್ಷಾ ಪಥ ಹೊಂದಿದ ಹೆಗ್ಗಳಿಕೆಗೆ ಪಾತ್ರವಾಗಲಿದೆ ಎಂದು ಸಚಿವರು ಹೇಳಿದರು.

<><*<><>*><>

ಚಾಮರಾಜನಗರ ಜಿಲ್ಲಾಡಳಿತ ವಾತಾವರಣದಲ್ಲಿನ ತೇವಾಂಶ ಹೀರಿಕೊಂಡು ನೀರು ಉತ್ಪಾದಿಸುವ ಏರೋ ವಾಟರ್ ಸಾಧನವನ್ನು ಸರ್ಕಾರಿ ಶಾಲೆಗೆ ಅಳವಡಿಸಿದೆ. ಚಾಮರಾಜನಗರ ಜಿಲ್ಲೆಯಲ್ಲಿ ಕುಡಿಯುವ ನೀರಿನ ಬವಣೆ ನೀಗಿಸಲು ಪ್ರಾಯೋಗಿಕವಾಗಿ ಈ ಸಾಧನವನ್ನು ಸೋಮವಾರಪೇಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅಳವಡಿಸಿಸಲಾಗಿದೆ. ಇದು ವಿದ್ಯುಚ್ಛಕ್ತಿ ಮೂಲಕ ಕಾರ್ಯ ನಿರ್ವಹಿಸುತ್ತದೆ. ಈ ಸಾಧನವು ಪ್ರತಿನಿತ್ಯ ೪೫-೫೦ ಲೀಟರ್ ನೀರು ಉತ್ಪಾದನೆ ಮಾಡಲಿದೆ. ಏರೋ ವಾಟರ್ ಎಂಬ ಕಂಪನಿಯ ತಂತ್ರಜ್ಞಾನ ಇದಾಗಿದ್ದು ವಾತಾವರಣದಲ್ಲಿರುವ ತೇವಾಂಶವನ್ನು ಸಂಗ್ರಹಿಸಿ ಅದನ್ನು ಸಾಂದ್ರೀಕರಿಸಿ ಹಾಗೂ ಶುದ್ದೀಕರಿಸುವ ಮೂಲಕ ಕುಡಿಯಲು ಯೋಗ್ಯವಾದ ನೀರನ್ನು ಉತ್ಪಾದಿಸಲಾಗುತ್ತಿದೆ. ಈ ತಂತ್ರಜ್ಞಾನವು ಅಂತರ್ಜಲ ಅಥವಾ ಮಳೆಯನ್ನು ಅವಲಂಬಿಸದೇ ವರ್ಷಪೂರ್ತಿ ನಿರಂತರವಾಗಿ ನೀರನ್ನು ಉತ್ಪಾದಿಸುವ ಸಾಮಾರ್ಥ್ಯ ಹೊಂದಿರುವುದು ವಿಶೇಷ.

<><*<><>*><>

ತುಂಗಭದ್ರ ಜಲಾಶಯದ ಗೇಟ್ ಅಳವಡಿಕೆ ಕಾರ್ಯ ಭರದಿಂದ ಸಾಗಿದ್ದು, ಮಾರ್ಚ್ ಅಂತ್ಯದ ವೇಳೆಗೆ ಒಟ್ಟು ೨೩ ಗೇಟ್‌ಗಳ ಕೆಲಸ ಮುಗಿಯುವ ನಿರೀಕ್ಷೆಯಿದೆ ಎಂದು  ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು  ತಿಳಿಸಿದರು. ಅವರು ಇಂದು ತುಂಗಭದ್ರಾ ಜಲಾಶಯದ ಮೇಲ್ಭಾಗಕ್ಕೆ ತೆರಳಿ, ತಾಂತ್ರಿಕ ತಂಡವು ನಡೆಸುತ್ತಿರುವ ಜಲಾಶಯದ ಕ್ರೆಸ್ಟ್ ಗೇಟ್ ಅಳವಡಿಕೆ ಕಾರ್ಯಗಳನ್ನು ವೀಕ್ಷಿಸಿ, ಮಾತನಾಡಿದರು. ಈಗಾಗಲೇ ತುಂಗಭದ್ರಾ ಜಲಾಶಯದ ೧೮ ನೂತನ ಕ್ರಸ್ಟ್ ಗೇಟ್‌ಗಳ ಅಳವಡಿಕೆ ಪೂರ್ಣಗೊಂಡಿದ್ದು, ೫ ಕ್ರಸ್ಟ್ ಗೇಟ್‌ಗಳ ಅಳವಡಿಕೆ ಪ್ರಗತಿಯಲ್ಲಿದೆ. ನುರಿತ ಅನುಭವಿಗಳ ತಂಡ ಮತ್ತು ಮುಖ್ಯ ಎಂಜಿನಿಯರ್‌ಗಳ ಪ್ರಕಾರ,

ಗೇಟ್ ಬದಲಾವಣೆಯ ಸಮಯದಲ್ಲಿ ಹಳೆಯ ಅಣೆಕಟ್ಟಿನ ರಚನೆಗೆ ಯಾವುದೇ ತೊಂದರೆಯಾಗಿಲ್ಲ ಎಂದರು. ಕೇಂದ್ರ ಸಚಿವರು ಮತ್ತು ಅಧಿಕಾರಿಗಳು ಕರ್ನಾಟಕದ ನೀರಾವರಿ ಯೋಜನೆಗಳ ಬಗ್ಗೆ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಸಚಿವರು ತಿಳಿಸಿದರು.

**<><*<><>*><>**

ಯುಗಾದಿ ನವ ವಸಂತ ಆರಂಭಕ್ಕೂ ಮುನ್ನ ಎರಡು ದಿನ ಸುರಿದ ಆಲಿಕಲ್ಲು, ಬಿರುಗಾಳಿ ಮಳೆ ರೈತರಿಗೆ ಕಣ್ಣೀರು ತರಿಸಿದ್ದು ಅಪಾರ ಬೆಳೆಹಾನಿಯಾಗಿದೆ ಎಂದು ಚಾಮರಾಜನಗರ ಜಿಲ್ಲಾ ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಿವಪ್ರಸಾದ್ ಮಾಹಿತಿ ನೀಡಿದ್ದಾರೆ. ೩೫೦ಕ್ಕೂ ಅಧಿಕ ಎಕರೆ ಪ್ರದೇಶದ ಫಸಲು ಹಾನಿಯಾಗಿದ್ದು ಜಿಲ್ಲಾ ತೋಟಗಾರಿಕೆ ಇಲಾಖೆ ಆಲಿಕಲ್ಲಿನ ಮಳೆಯಿಂದ ಉಂಟಾಗಿರುವ ಬೆಳೆ ಹಾನಿಯ ಸಮೀಕ್ಷೆ ನಡೆಸುತ್ತಿದೆ ಎಂದರು. ಸಮೀಕ್ಷೆ ಪ್ರಕಾರ, ಜಿಲ್ಲೆಯಲ್ಲಿ ೩೫೦ ಎಕರೆಗೂ ಅಧಿಕ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ.

**<><*<><>*><>**

ಕೋಲಾರ ಜಿಲ್ಲೆಯಲ್ಲಿ ಪ್ರಸ್ತುತ ತಾಪಮಾನ ಏರಿಕೆಯಾಗಿದ್ದು, ಮತ್ತೆ ಮಳೆಯಾಗುವ ಸಾಧ್ಯತೆಯಿದೆ. ಕೆಲವು ಕಡೆ ಗಾಳಿ ಮತ್ತು ಆಲಿಕಲ್ಲು ಮಳೆಯ ಮುನ್ಸೂಚನೆ ಇರುವುದರಿಂದ, ಮಾವಿನ ತೋಟಗಳಲ್ಲಿ ಕಾಯಿ ಕಟ್ಟುವ ಹಾಗೂ ಬಟಾಣಿ ಗಾತ್ರದ ಹಂತದಲ್ಲಿರುವ ಬೆಳೆಗಳಿಗೆ ವಿಶೇಷ ನಿಗಾ ವಹಿಸುವಂತೆ ಕೃಷಿ ವಿಜ್ಞಾನ ಕೇಂದ್ರ ತಾಂತ್ರಿಕ ಸಲಹೆಗಳನ್ನು ನೀಡಿದೆ.

**<><*<><>*><>**

ಕಳೆದ ೧೧ ವರ್ಷಗಳ ನಂತರ ಇದೇ ಮೊದಲ ಬಾರಿಗೆ ಮಾರ್ಚ್ ತಿಂಗಳಲ್ಲಿ ಅನಿರೀಕ್ಷಿತವಾಗಿ ಆಲಿಕಲ್ಲು ಮಳೆ ಆಗಿದ್ದು, ಇದರಿಂದ ಕಲಘಟಗಿ, ಹುಬ್ಬಳ್ಳಿ, ನವಲಗುಂದ ತಾಲೂಕಿನಲ್ಲಿ ಜಾನುವಾರು, ಮನೆ ಮತ್ತು ಬೆಳೆ ಹಾನಿ ಆಗಿರುವ ವರದಿಯಾಗಿದೆ. ಸಂಬಂಧಿಸಿದ ತಾಲೂಕುಗಳ ಅಧಿಕಾರಿಗಳು ಪಾರದರ್ಶಕವಾಗಿ ಜಂಟಿ ಸಮೀಕ್ಷೆ ಮಾಡಿ, ವರದಿ ಸಲ್ಲಿಸಬೇಕೆಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಸೂಚಿಸಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**